# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 554**

**ಮಾನ್ಯ ಸದಸ್ಯರ ಹೆಸರು : ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)**

**ಉತ್ತರಿಸುವ ದಿನಾಂಕ : 20.08.2026**

**ಉತ್ತರಿಸುವ ಸಚಿವರು : ಗೃಹ ಸಚಿವರು**

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಕೊಡಗು ಜಿಲ್ಲೆಯ ಕುಟ್ಟ ಸಮೀಪದ ಹೋಂಸ್ಟೇ ಒಂದರಲ್ಲಿ ಅಮೆರಿಕದ ಮಹಿಳಾ ಪ್ರವಾಸಿಗರೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಆಘಾತಕಾರಿ ಘಟನೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪ್ರಕರಣದ ಸಂಪೂರ್ಣ ವಿವರಗಳೇನು; | ಕೊಡಗು ಜಿಲ್ಲೆಯ ಕುಟ್ಟ ಸಮೀಪದ ಹೋಂಸ್ಟೇ ಒಂದರಲ್ಲಿ ಅಮೆರಿಕದ ಮಹಿಳಾ ಪ್ರವಾಸಿಗರೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದ್ದು, ನೊಂದ ಮಹಿಳೆಯು ನೀಡಿದ ದೂರಿನ ಮೇರೆಗೆ ಆರೋಪಿಗಳ ವಿರುದ್ಧ ಕುಟ್ಟ ಪೊಲೀಸ್ ಠಾಣೆಯಲ್ಲಿ ಮೊ ಸಂ: 34/2026 46(1), 251(2), 238, 239, ರೆ/ವಿ 3(5) ಬಿ.ಎನ್.ಎಸ್-2023 ರೀತ್ಯಾ ಪ್ರಕರಣ ದಾಖಲಿಸಿ ದಿನಾಂಕ:18.04.2026 ರಂದು ತನಿಖೆ ಕೈಗೊಂಡು 03 ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರವನ್ನು ಸಲ್ಲಿಸಲಾಗಿರುತ್ತದೆ.<br><br>ನ್ಯಾಯಾಲಯದಲ್ಲಿ ಮುಂದಿನ ವಿಚಾರಣೆ ದಿನಾಂಕ:27.08.2026ರಂದು ನಿಗದಿಯಾಗಿರುತ್ತದೆ. |
| ಆ) | ಈ ದೌರ್ಜನ್ಯದ ಘಟನೆ ನಡೆದ ತಕ್ಷಣ ಹೋಂಸ್ಟೇ ಮಾಲೀಕರು ಪೊಲೀಸರಿಗೆ ಮಾಹಿತಿ ನೀಡುವ ಬದಲು, ಸಂತ್ರಸ್ತೆಯನ್ನು ಅಕ್ರಮವಾಗಿ ಬಂಧನದಲ್ಲಿರಿಸಿ ಆಕೆಯ ವೈ-ಫೈ (WiFi) ಸಂಪರ್ಕವನ್ನು ಕಡಿತಗೊಳಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಮಾದಕ ದ್ರವ್ಯ ಸೇವಿಸಿ ದೌರ್ಜನ್ಯ ಎಸಗಿದೆ ಎನ್ನಲಾದ ಜಾರ್ಖಂಡ್ ಮೂಲದ ಸಿಬ್ಬಂದಿ ಹಾಗೂ ನಿರ್ಲಕ್ಷ್ಯ ತೋರಿದ ಹೋಂಸ್ಟೇ ಮಾಲೀಕನ ವಿರುದ್ಧ ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು; | ಸದರಿ ಪ್ರಕರಣದಲ್ಲಿ ದೌರ್ಜನ್ಯ ಎಸಗಿದ ಆರೋಪಿ ಮತ್ತು ನಿರ್ಲಕ್ಷ್ಯ ತೋರಿದ ಹೋಂಸ್ಟೇ ಮಾಲೀಕ ಸೇರಿದಂತೆ 02 ಜನ ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಪ್ರಸ್ತುತ 02 ಜನ ಆರೋಪಿಗಳು ನ್ಯಾಯಾಂಗ ಬಂಧನದಲ್ಲಿರುತ್ತಾರೆ.<br><br>ಸದರಿ ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಿ ದೌರ್ಜನ್ಯ ಎಸಗಿದ ಜಾರ್ಖಂಡ್ ಮೂಲದ ಸಿಬ್ಬಂದಿ ಮತ್ತು ನಿರ್ಲಕ್ಷ್ಯ ತೋರಿದ ಹೋಂಸ್ಟೇ ಮಾಲೀಕನ ವಿರುದ್ಧ ಕ್ರಮ ಕೈಗೊಂಡಿದ್ದು ಈಗಾಗಲೇ ನ್ಯಾಯಾಲಯಕ್ಕೆ ದೋಷರೋಪಣಾ ಪತ್ರವನ್ನು ಸಲ್ಲಿಸಲಾಗಿರುತ್ತದೆ. |

| | | |
|---|---|---|
| ಇ) | ಸಂತ್ರಸ್ತೆಯು ಮೈಸೂರು ತಲುಪಿ, ಅಲ್ಲಿಂದ ಅಮೆರಿಕದ ರಾಯಭಾರ ಕಚೇರಿಯನ್ನು ಸಂಪರ್ಕಿಸಿದ ನಂತರವಷ್ಟೇ ಆರೋಪಿಗಳ ಮೇಲೆ ಕ್ರಮ ಕೈಗೊಳ್ಳುವ ಪ್ರಕ್ರಿಯೆ ಚುರುಕುಗೊಂಡಿರುವುದು ನಿಜವೇ; ಸ್ಥಳೀಯ ಮಟ್ಟದಲ್ಲಿ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸದೆ ವಿಳಂಬ ಧೋರಣೆ ಅನುಸರಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಜರುಗಿಸಿದೆ; | ಸದರಿ ಪ್ರಕರಣದಲ್ಲಿ ಸ್ಥಳೀಯ ಮಟ್ಟದಲ್ಲಿ ಯಾವುದೇ ನಿರ್ಲಕ್ಷ್ಯ ಅಥವಾ ವಿಳಂಬ ಧೋರಣೆ ಅನುಸರಿಸದೇ ಘಟನೆ ನಡೆದ ಬಗ್ಗೆ ಮಾಹಿತಿ ದೊರೆತ ಕೂಡಲೇ ಸ್ಥಳೀಯ ಮಟ್ಟದ ಅಧಿಕಾರಿಗಳು ಮೈಸೂರಿಗೆ ತೆರಳಿ ಸದರಿ ಮಹಿಳೆಯಿಂದ ಹೇಳಿಕೆಯನ್ನು ದಾಖಲು ಮಾಡಿಕೊಂಡು ಪ್ರಕರಣವನ್ನು ದಾಖಲಿಸಿ ತನಿಖೆ ಕೈಗೊಂಡಿದ್ದು, ತಮ್ಮ ಕರ್ತವ್ಯವನ್ನು ನಿಯಮಾನುಸಾರ ನಿರ್ವಹಿಸಿದ್ದು, ಈ ಸಂಬಂಧ ಯಾವುದೇ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಅಗತ್ಯ ಕಂಡುಬಂದಿರುವುದಿಲ್ಲ. |
| ಈ) | ಹಿಂದೆ ಹಂಪಿಯಲ್ಲಿ ಇಸ್ರೇಲಿ ಮಹಿಳೆಯ ಮೇಲೆ ನಡೆದಿದ್ದ ಭೀಕರ ಸಾಮೂಹಿಕ ಅತ್ಯಾಚಾರದ ಘಟನೆಯ ನಂತರ ಇದೀಗ ಕೊಡಗಿನಲ್ಲಿ ನಡೆದಿರುವ ಈ ಘಟನೆಯು, ವಿಶ್ವ ಪ್ರವಾಸೋದ್ಯಮ ನಕ್ಷೆಯಲ್ಲಿ ರಾಜ್ಯದ ವರ್ಚಸ್ಸನ್ನು ಕುಗ್ಗಿಸುತ್ತಿರುವುದು ಹಾಗೂ ಪ್ರವಾಸೋದ್ಯಮ ಆರ್ಥಿಕತೆಯು ಪ್ರವಾಸಿಗರ ಸುರಕ್ಷತೆಯನ್ನು ಖಾತರಿಪಡಿಸುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ತಡೆಗಟ್ಟುವ ಉದ್ದೇಶದಿಂದ, ಪ್ರವಾಸಿ ತಾಣಗಳ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ. ಈ ಸಂಬಂಧ ಜಿಲ್ಲೆಯಲ್ಲಿರುವ ಹೋಂಸ್ಟೇ ಮಾಲೀಕರು ಹಾಗೂ ಪ್ರವಾಸೋದ್ಯಮ ಘಟಕಗಳ ಪ್ರತಿನಿಧಿಗಳೊಂದಿಗೆ ಸಭೆಗಳನ್ನು ನಡೆಸಿ, ನಿಗದಿತ ಸುರಕ್ಷತಾ ಮಾನದಂಡಗಳ ಕಡ್ಡಾಯ ಪಾಲನೆ, ಪ್ರವಾಸಿಗರ ಭದ್ರತೆ ಹಾಗೂ ತುರ್ತು ಸಂದರ್ಭಗಳಲ್ಲಿ ತಕ್ಷಣದ ಪೊಲೀಸ್ ಸ್ಪಂದನೆಗೆ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆಗಳನ್ನು ನೀಡಲಾಗಿದೆ. ಪ್ರವಾಸಿಗರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯು ಸಂಬಂಧಪಟ್ಟ ಇಲಾಖೆಗಳ ನಡುವೆ ನಿರಂತರ ಸಮನ್ವಯದೊಂದಿಗೆ ಅಗತ್ಯ ಮುನ್ನೆಚ್ಚರಿಕಾ ಹಾಗೂ ಭದ್ರತಾ ಕ್ರಮಗಳನ್ನು ನೀಡಲಾಗುತ್ತಿದೆ. |
| ಉ) | ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಹೋಂಸ್ಟೇಗಳ ನೋಂದಣಿ ಮತ್ತು ನಿರ್ವಹಣೆಯಲ್ಲಿ ಕಾನೂನು ನಿರ್ಬಂಧಗಳನ್ನು ಬಿಗಿಗೊಳಿಸಲು ಸರ್ಕಾರ ರೂಪಿಸಿರುವ ಹೊಸ ಮಾರ್ಗಸೂಚಿಗಳೇನು? | ಕೊಡಗು ಜಿಲ್ಲೆಯಲ್ಲಿ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಹೋಂಸ್ಟೇಗಳ ನೋಂದಣಿ ಮತ್ತು ಕಾರ್ಯಾಚರಣೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕೊಡಗು ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ಉದ್ದೇಶದಿಂದ ಸಭೆಯನ್ನು ನಡೆಸಲಾಗಿದ್ದು, ಎಲ್ಲಾ ಹೋಂ ಸ್ಟೇ |

| | |
|---|---|
| | ಮಾಲೀಕರಿಗೆ ಕಟ್ಟುನಿಟ್ಟಾಗಿ ಸೂಚನೆಗಳನ್ನು ನೀಡಲಾಗಿರುತ್ತದೆ. ಕರ್ನಾಟಕ ಪ್ರವಾಸೋದ್ಯಮ ಇಲಾಖೆಯು ಮಾರ್ಗಸೂಚಿಗಳ ಅನ್ವಯ ಹೋಂಸ್ಟೇಗಳ ನೋಂದಣಿಯಲ್ಲಿ ನಿಗದಿತ ಮಾನದಂಡಗಳ ಪಾಲನೆಯನ್ನು ಕಡ್ಡಾಯಗೊಳಿಸಲಾಗಿದ್ದು, ನೋಂದಾಯಿತ ಹೋಂಸ್ಟೇಗಳ ವಿವರಗಳನ್ನು ಇಲಾಖೆಯ ಅಧಿಕೃತ ಪಟ್ಟಿಯಲ್ಲಿ ದಾಖಲಿಸುವ ವ್ಯವಸ್ಥೆ ಮಾಡಲಾಗಿದೆ.<br><br>ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಹೋಂಸ್ಟೇ ಮಾಲೀಕರು ಅತಿಥಿಗಳ ಗುರುತಿನ ದಾಖಲೆ ಹಾಗೂ ವಾಸ್ತವ್ಯದ ವಿವರಗಳನ್ನು ಸಮರ್ಪಕವಾಗಿ ದಾಖಲಿಸಿ ನಿರ್ವಹಿಸುವುದು, ವಿದೇಶಿ ಪ್ರವಾಸಿಗರ ವಿವರಗಳನ್ನು ನಿಯಮಾನುಸಾರ ಫಾರಂ-ಸಿ ನಲ್ಲಿ ದಾಖಲಿಸಿ ಸಂಬಂಧಪಟ್ಟ ಪೊಲೀಸ್ ಠಾಣೆಗೆ ಕೂಡಲೇ ನೀಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಹೋಂಸ್ಟೇ ಆವರಣದ ಸಾಮಾನ್ಯ ಪ್ರದೇಶಗಳಲ್ಲಿ ಅಗತ್ಯ ಭದ್ರತಾ ವ್ಯವಸ್ಥೆಗಳನ್ನು ಕಲ್ಪಿಸುವಂತೆ ಹಾಗೂ ಸಿಸಿಟಿವಿ ವ್ಯವಸ್ಥೆ, ಅತಿಥಿಗಳ ದಾಖಲೆ ನಿರ್ವಹಣೆ ಮತ್ತು ಸುರಕ್ಷತಾ ಕ್ರಮಗಳ ಪಾಲನೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ಪರಿಶೀಲನೆ ನಡೆಸಲಾಗುತ್ತಿದೆ.<br><br>ಜಿಲ್ಲಾ ಮಟ್ಟದಲ್ಲಿ ನೋಂದಾಯಿತ ಮತ್ತು ನೋಂದಣಿ ಇಲ್ಲದೆ ಕಾರ್ಯನಿರ್ವಹಿಸುತ್ತಿರುವ ಹೋಂಸ್ಟೇಗಳನ್ನು ಗುರುತಿಸಿ, ಅನಧಿಕೃತವಾಗಿ ಕಾರ್ಯನಿರ್ವಹಿಸುವ ಘಟಕಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲು ಹಾಗೂ ನೋಂದಾಯಿತ ಹೋಂಸ್ಟೇಗಳು ನಿಗದಿತ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಖಚಿತಪಡಿಸಿಕೊಳ್ಳಲು ಪ್ರವಾಸೋದ್ಯಮ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸ್ಥಳೀಯ ಆಡಳಿತದ ನಡುವೆ ಸಮನ್ವಯದಿಂದ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 29 ಎಸ್‌ಡಿಎನ್ 2026

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು